# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 16-03-2021 ಪ್ರಶ್ನೆ ಸಂಖ್ಯೆ : 1125 (1208)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು

ವಿಷಯ : ಶಿವಮೊಗ್ಗ ಜಿಲ್ಲೆಯಲ್ಲಿ ಇರುವ ಕಲ್ಲುಕ್ವಾರಿಗಳ ಕುರಿತು

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ಇರುವ ಕಲ್ಲು ಕ್ವಾರೆಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಪರವಾನಗಿ ಪಡೆದಿರುವ, ಪರವಾನಗಿ ಇಲ್ಲದೆ ನಡೆಸುತ್ತಿರುವ ಕಲ್ಲು ಕ್ವಾರೆಗಳ ಸಂಖ್ಯೆ ಎಷ್ಟು ; (ಪೂರ್ಣ ವಿವರ ನೀಡುವುದು)

(ಆ) ಶಿವಮೊಗ್ಗ ಜಿಲ್ಲೆಯಲ್ಲಿ ಅರಣ್ಯ ಮತ್ತು ಸರ್ಕಾರಿ ಭೂಮಿಗಳಲ್ಲಿ ಅಕ್ರಮವಾಗಿ ಕಲ್ಲುಗಣಿಗಾರಿಕೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಶಿವಮೊಗ್ಗ ಜಿಲ್ಲೆಯ ಹುಣಸೋಡು ಕಲ್ಲುಕ್ವಾರೆಯಲ್ಲಿ ಇತ್ತೀಚೆಗೆ ಸಂಭವಿಸಿದ ದುರಂತದಲ್ಲಿ ಸಾವನ್ನಪ್ಪಿದ ಕಾರ್ಮಿಕರ ಕುಟುಂಬಗಳಿಗೆ ಸರ್ಕಾರದಿಂದ ಪರಿಹಾರಧನ ನೀಡಲಾಗಿದೆಯೇ ; ಹೌದಾದಲ್ಲಿ ನೀಡಲಾದ ಪರಿಹಾರಧನದ ಮೊತ್ತವೆಷ್ಟು ;

(ಈ) ಶಿವಮೊಗ್ಗ ಜಿಲ್ಲೆಯ ಹುಣಸೋಡು ಕಲ್ಲುಕ್ವಾರೆಯಲ್ಲಿ ಇತ್ತೀಚೆಗೆ ಸಂಭವಿಸಿದ ಸ್ಫೋಟಕ್ಕೆ ಸಂಬಂಧಿಸಿದಂತೆ, ಸರ್ಕಾರ ಯಾರ ನೇತೃತ್ವದಲ್ಲಿ ತನಿಖೆಯನ್ನು ಆರಂಭಿಸಿದೆ ? (ಸಂಪೂರ್ಣ ವಿವರ ನೀಡುವುದು)